ಕರ್ನಾಟಕ ಸರ್ಕಾರ
ತಾಂತ್ರಿಕ ಶಿಕ್ಷಣ ಇಲಾಖೆ

ಸಂಖ್ಯೆ:ಬಿಟಿಇ03/ಇಸಿಎಸ್(1)/2018

ಕಾರ್ಯದರ್ಶಿಯವರ ಕಛೇರಿ,
ತಾಂತ್ರಿಕ ಪರೀಕ್ಷಾ ಮಂಡಳ,
ಅರಮನೆ ರಸ್ತೆ, ಬೆಂಗಳೂರು-1
ದಿನಾಂಕ:19-11-2018

ಸುತ್ತೋಲೆ

ವಿಷಯ: 2018 ನವೆಂಬರ್/ಡಿಸೆಂಬರ್ ಡಿಪ್ಲೋಮ ಸೆಮಿಸ್ಟರ್ ಥಿಯರಿ ಪರೀಕ್ಷೆಯ ದಿನಾಂಕ:20-11-2018 ರ ಪರೀಕ್ಷೆಗಳನ್ನು ಮುಂದೂಡಿರುವ ಕುರಿತು.
ಉಲ್ಲೇಖ:ಸರ್ಕಾರದ ಅಧಿಸೂಚನೆ ಸಂಖ್ಯೆ:ಡಿಪಿಎಆರ್ 50 ಹೆಚ್‌ಹೆಚ್‌ಎಲ್ 2018 ದಿ:19-11-2018

*******

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖಿತ ಸರ್ಕಾರದ ಅಧಿಸೂಚನೆಯನ್ವಯ ಉಡುಪಿ ಮತ್ತು ದಕ್ಷಿಣ ಕನ್ನಡ ಜಿಲ್ಲೆಗಳಲ್ಲಿ ಈದ್ ಮಿಲಾದ್ ಹಬ್ಬದ ಆಚರಣೆ ಸಲುವಾಗಿ ದಿನಾಂಕ:20-11-2018 ರಂದು ಸಾರ್ವತ್ರಿಕ ರಜೆ ಘೋಷಣೆಯಾಗಿರುತ್ತದೆ. ಪ್ರಯುಕ್ತ 2018 ನವೆಂಬರ್/ಡಿಸೆಂಬರ್ ಡಿಪ್ಲೋಮ ಸೆಮಿಸ್ಟರ್ ಥಿಯರಿ ಪರೀಕ್ಷೆಯ ವೇಳಾ ಪಟ್ಟಿಯನ್ವಯ ದಿನಾಂಕ:20-11-2018 ರಂದು ರಾಜ್ಯಾದ್ಯಂತ ಎಲ್ಲಾ ಪರೀಕ್ಷಾ ಕೇಂದ್ರಗಳಲ್ಲಿ ನಡೆಯಬೇಕಾಗಿದ್ದ ಎಲ್ಲಾ ಥಿಯರಿ ಪರೀಕ್ಷೆಗಳನ್ನು **ದಿನಾಂಕ:07-12-2018ಕ್ಕೆ** ಮುಂದೂಡಲಾಗಿದೆ. ಪರೀಕ್ಷಾ ದಿನಾಂಕವನ್ನು ಮಾತ್ರ ಮುಂದೂಡಲಾಗಿದ್ದು, ಪರೀಕ್ಷಾ ವೇಳೆಯಲ್ಲಿ ಯಾವುದೇ ಬದಲಾವಣೆಗಳಿರುವುದಿಲ್ಲ. ಇನ್ನುಳಿದಂತೆ ಬೇರೆ ಯಾವುದೇ ಬದಲಾವಣೆಗಳಿರುವುದಿಲ್ಲವೆಂದು ತಿಳಿಸಲಾಗಿದೆ. ಈ ವಿಷಯವನ್ನು ವಿದ್ಯಾರ್ಥಿಗಳು/ ಉಪನ್ಯಾಸಕರು/ ಪೋಷಕರ ಗಮನಕ್ಕೆ ತಪ್ಪದೇ ತರುವಂತೆ ಎಲ್ಲಾ ಪಾಲಿಟೆಕ್ನಿಕ್ ಪ್ರಾಂಶುಪಾಲರುಗಳಿಗೆ ತಿಳಿಸಲಾಗಿದೆ.

ಕಾರ್ಯದರ್ಶಿ

ಇವರಿಗೆ,
ರಾಜ್ಯದ ಎಲ್ಲಾ ಪರೀಕ್ಷಾ ಕೇಂದ್ರಗಳ ಪ್ರಿನ್ಸಿಪಾಲರುಗಳು/ ಮುಖ್ಯಅಧೀಕ್ಷಕರು /ಉಪಮುಖ್ಯ ಅಧೀಕ್ಷಕರು/ಮುಖ್ಯ ವೀಕ್ಷಕರುಗಳಿಗೆ – ಮಾಹಿತಿ ಮತ್ತು ಅಗತ್ಯ ಕ್ರಮಕ್ಕಾಗಿ

ಪ್ರತಿ:1) ಖಜಾನೆ ನಿರ್ದೇಶಕರು, ಕರ್ನಾಟಕ ಸರ್ಕಾರ, ಬೆಂಗಳೂರು
2) ಡೈರೆಕ್ಟರ್ ಜನರಲ್ ಆಫ್ ಪೋಲೀಸ್, ಬೆಂಗಳೂರು
3) ಪರೀಕ್ಷಾ ತನಿಖಾ ದಳಗಳ ಮುಖಂಡರುಗಳು – ಮಾಹಿತಿಗಾಗಿ ಮತ್ತು ಅಗತ್ಯ ಕ್ರಮಕ್ಕಾಗಿ
4) ಸಂಬಂಧಪಟ್ಟ ಉಪ/ಜಿಲ್ಲಾ ಖಜಾನಾಧಿಕಾರಿಗಳು – ಮಾಹಿತಿಗಾಗಿ ಮತ್ತು ಅಗತ್ಯ ಕ್ರಮಕ್ಕಾಗಿ
5) ಸಂಬಂಧಪಟ್ಟ ಆರಕ್ಷಕ ಠಾಣಾಧಿಕಾರಿಗಳು – ಮಾಹಿತಿಗಾಗಿ ಮತ್ತು ಅಗತ್ಯ ಕ್ರಮಕ್ಕಾಗಿ
6) ನಿರ್ದೇಶಕರ ಆಪ್ತ ಶಾಖೆ
7) ಸಾರ್ವಜನಿಕ ಸಂಪರ್ಕಾಧಿಕಾರಿ, ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ.
8) ಇ-ಗವರ್ನೆನ್ಸ್ ವಿಭಾಗ – ವೆಬ್ ಸೈಟ್‌ನಲ್ಲಿ ಪ್ರಕಟಿಸಲು
9) ಗಣಕ ಕೇಂದ್ರ – ವೆಬ್ ಪೋರ್ಟಲ್‌ನಲ್ಲಿ ಪ್ರಕಟಿಸಲು
10) 10) ಕಾರ್ಯದರ್ಶಿಯವರ ಆಪ್ತ ಶಾಖೆ